682(498) : ಶ್ರೀ ಪ್ರಕಾಶ್ ಖಂಡ್ರೆ (ಬಾಲ್ಕಿ) ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಭಾಲ್ಕಿ ಪಟ್ಟಣದಲ್ಲಿ ಸದ್ಯದ ಪರಿಸ್ಥಿತಿಯಲ್ಲಿ ಕುಡಿಯುವ ನೀರಿಗಾಗಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದರೆ ಏನು ಕ್ರಮ ಕೈಗೊಳ್ಳಲಾಗಿದೆ;

ಇ) ಈ ಸಮಸ್ಯೆಯ ತಾತ್ಕಾಲಿಕ ಪರಿಹಾರಕ್ಕಾಗಿ ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ;

ಈ) ಇಲ್ಲದಿದ್ದಲ್ಲಿ ಏನು ಕ್ರಮ ಕೈಗೊಳ್ಳಲಾಗುವುದು?

ಶ್ರೀ ಧರ್ಮಸಿಂಗ್ (ಮುಖ್ಯ ಮಂತ್ರಿಗಳು)

ಅ) ಬಂದಿದೆ

ಆ) ಭಾಲ್ಕಿ ಪಟ್ಟಣಕ್ಕೆ ಕಾರಂಜಾ ನದಿ ಮೂಲದಿಂದ ಕುಡಿಯುವ ನೀರು ಸರಬರಾಜು ಯೋಜನೆಯ ರೂ. 603.20 ಲಕ್ಷಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ. ಯೋಜನೆಯ ಪ್ರಸ್ತಾವನೆಗಳನ್ನು ತಾಂತ್ರಿಕವಾಗಿ ಮತ್ತೊಮ್ಮೆ ಪರಿಶೀಲಿಸಿ ಸದರಿ ಯೋಜನೆಗೆ ತಾಂತ್ರಿಕ ಮಂಜೂರಾತಿಯನ್ನು ಮಂಡಳಿಯಿಂದ ದಿನಾಂಕ 29–1–2003ರಲ್ಲಿ ನೀಡಲಾಗಿರುತ್ತದೆ. ಹಾಗೂ ಸದರಿ ಯೋಜನೆಯ ಕಾಮಗಾರಿಗಳನ್ನು ಪ್ಯಾಕೇಜ್ ಟೆಂಡರ್ ಆಧಾರದ ಮೇಲೆ ಕೈಗೆತ್ತಿಕೊಂಡು ಕಾಮಗಾರಿಗಳು ಪ್ರಗತಿಯಲ್ಲಿದೆ.

ಇ) ಭಾಲ್ಕಿ ಪಟ್ಟಣದ ಕುಡಿಯುವ ನೀರಿನ ಸಮಸ್ಯೆಯ ತಾತ್ಕಾಲಿಕ ಪರಿಹಾರಕ್ಕಾಗಿ 2003–04ನೇ ಸಾಲಿನ ಬರಪರಿಹಾರ ಕಾಮಗಾರಿಯಡಿಯಲ್ಲಿ ಒಟ್ಟು ರೂ. 12.45 ಲಕ್ಷಗಳ ಅನುದಾನದಲ್ಲಿ ಕಾರಂಜಾ ನದಿಗೆ ತಾತ್ಕಾಲಿಕ ಒಡ್ಡು ನಿರ್ಮಿಸಲಾಗಿದೆ, ಕೊಳವೆ ಬಾವಿಗಳನ್ನು ಕೊರೆದು ವಿದ್ಯುತ್ ಪಂಪಗಳನ್ನು ಅಳವಡಿಸಿ ವಿವಿಧ ಬಡಾವಣೆಗಳಿಗೆ ಕೊಳವೆ ಮಾರ್ಗಗಳನ್ನು ಅಳವಡಿಸಲಾಗಿದೆ. ಹಾಗೂ ಹಾಳಿ ಇರುವ ಕೊಳವೆ ಬಾವಿಗಳನ್ನು ಸ್ವಚ್ಛಗೊಳಿಸುವ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿದೆ.

ಈ) ಭಾಲ್ಕಿ ಪಟ್ಟಣಕ್ಕೆ ಕಾರಂಜಾ ನದಿ ಮೂಲದಿಂದ ಕುಡಿಯುವ ನೀರು ಸರಬರಾಜು ಯೋಜನೆಯ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗಿದೆ. ಹಾಗೂ ಈಗಾಗಲೇ ಬರಪರಿಹಾರ ಕಾಮಗಾರಿಯಡಿಯಲ್ಲಿ ಕೆಲವು ಬಡಾವಣೆಗಳಿಗೆ ಕೊಳವೆ ಮಾರ್ಗದ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ.

683(499) : ಶ್ರೀ ಪ್ರಕಾಶ್ ಖಂಡ್ರೆ (ಬಾಲ್ಕಿ) ಮಾನ್ಯ ಪೌರಾಡಳಿತ ಹಾಗೂ ಕೆ.ಯು.ಐ.ಡಿ.ಎಫ್.ಸಿ. ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಭಾಲ್ಕಿ ಪಟ್ಟಣಕ್ಕೆ ಐ.ಡಿ.ಎಸ್.ಎಂ.ಟಿ. ಯೋಜನೆಯಡಿಯಲ್ಲಿ ಕೇಂದ್ರ ಮತ್ತ ರಾಜ್ಯ ಸರ್ಕಾರಗಳು ಅನುದಾನ ನೀಡಿರುವ 2 ಕೋಟಿ ಹಣದ ಉಪಯೋಗವು ಇಲ್ಲಿಯವರೆಗೆ ಯಾವ ಕೆಲಸಗಳಿಗೆ ವಿನಿಯೋಗಿಸಲಾಗಿದೆ;

ಆ) ಆ ಕೆಲಸಗಳು ಯಾವ ಹಂತದಲ್ಲಿವೆ;

ಇ) ಸರ್ಕಾರಗಳು ಬಿಡುಗಡೆ ಮಾಡಿರುವ ಪೂರ್ತಿ ಹಣ : ವಿನಿಯೋಗಿಸಲಾಗಿದೆಯೇ;